ಕರ್ನಾಟಕ ಸರ್ಕಾರ

ಸಂಖ್ಯೆ: ಡಿಪಿಎಆರ್ 52 ಪಿಎಸ್‌ಪಿ 98

ಕರ್ನಾಟಕ ಸರ್ಕಾರದ ಸಚಿವಾಲಯ,
11ನೇ ಮಹಡಿ, ವಿಶ್ವೇಶ್ವರಯ್ಯ ಕೇಂದ್ರ,
ವಿಶ್ವೇಶ್ವರಯ್ಯ ಮುಖ್ಯ ಗೋಪುರ,
ಬೆಂಗಳೂರು, ದಿನಾಂಕ: 25-5-98.

ಸುತ್ತೋಲೆ

ವಿಷಯ: ಸ್ವಾತಂತ್ರ್ಯ ಹೋರಾಟಗಾರರ ವಿಧವಾ ಪತ್ನಿಯರಿಗೆ ಕುಟುಂಬ ಪಿಂಚಣಿ ಮಂಜೂರು ಮಾಡಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ಪ್ರತ್ಯಾಯೋಜಿಸುವ ಬಗ್ಗೆ.

ಉಲ್ಲೇಖ: ಸರ್ಕಾರಿ ಆದೇಶ ಸಂಖ್ಯೆ: ಡಿಪಿಎಆರ್ 67 ಪಿಎಸ್‌ಪಿನ 78 ದಿನಾಂಕ 12-6-78.

ಕರ್ನಾಟಕ ಸ್ವಾತಂತ್ರ್ಯ ಸೈನಿಕ ಸನ್ಮಾನ ಗೌರವಧನ ಪರಿಯೋಜನೆ 1969ರ ನಿಯಮ 3(1)ರನ್ವಯ ಪ್ರತಿಯೊಬ್ಬ ಸ್ವಾತಂತ್ರ್ಯ ಹೋರಾಟಗಾರರು ಮತ್ತು ಮೃತ ಸ್ವಾತಂತ್ರ್ಯ ಹೋರಾಟಗಾರರ ಪತ್ನಿ / ಪತಿ ಅಥವಾ ಅಪ್ರಾಪ್ತ ವಯಸ್ಸಿನ ಮಕ್ಕಳಿಗೂ ಸಹ ಪಿಂಚಣಿ ಮಂಜೂರಾತಿ ಪಡೆಯಲು ಅರ್ಹರಾಗಿರುತ್ತಾರೆ. ಸ್ವಾತಂತ್ರ್ಯ ಚಳುವಳಿಯಲ್ಲಿ ಭಾಗವಹಿಸಿದ ಸ್ವಾತಂತ್ರ್ಯ ಹೋರಾಟಗಾರರು ರಾಜ್ಯ ಗೌರವಧನ ಮಂಜೂರಾತಿ ಕೋರಿ ಅರ್ಜಿ ಸಲ್ಲಿಸಿದಲ್ಲಿ ಪರಿಶೀಲಿಸಿ ಗೌರವಧನ ಮಂಜೂರು ಮಾಡಲಾಗುತ್ತದೆ.

ಕರ್ನಾಟಕ ಸ್ವಾತಂತ್ರ್ಯ ಸೈನಿಕ ಸನ್ಮಾನ ಗೌರವಧನ ಪರಿಯೋಜನೆ 1969ರ ನಿಯಮ 3(1)ರನ್ವಯ ಗೌರವಧನ ಪಡೆಯುತ್ತಿರುವ ಸ್ವಾತಂತ್ರ್ಯ ಯೋಧರು ಮೃತರಾದಲ್ಲಿ ಅವರ ವಿಧವಾ ಪತ್ನಿಯರಿಂದ ಕರ್ನಾಟಕ ಸ್ವಾತಂತ್ರ್ಯ ಸೈನಿಕ ಸನ್ಮಾನ ಗೌರವಧನ ಪರಿಯೋಜನೆ 1969ರ ನಿಯಮ 4ರನ್ವಯ ನಿಗದಿತ ಅರ್ಜಿ ಜೊತೆಗೆ ಮರಣ ಪ್ರಮಾಣ ಪತ್ರ ಮತ್ತು ಪ್ರಮಾಣ ಪತ್ರ ಇತ್ಯಾದಿ ಅವಶ್ಯಕ ದಾಖಲೆಗಳನ್ನು ಪಡೆದು ಅವರಿಗೆ ಕುಟುಂಬ ಪಿಂಚಣಿ ಮಂಜೂರು ಮಾಡುವ ಅಧಿಕಾರವನ್ನು ಸರ್ಕಾರಿ ಆದೇಶ ಸಂಖ್ಯೆ: ಡಿಪಿಎಆರ್ 67 ಪಿಎಸ್‌ಪಿನ 78 ದಿನಾಂಕ 12-6-78ರಲ್ಲಿ ಜಿಲ್ಲಾಧಿಕಾರಿಗಳಿಗೆ ನೀಡಲಾಗಿದೆ (ಪ್ರತಿ ಲಗತ್ತಿಸಿದೆ). ಆದರೆ ಕೆಲವೊಂದು ಪ್ರಕರಣಗಳಲ್ಲಿ ಅಂದರೆ ಸ್ವಾತಂತ್ರ್ಯ ಹೋರಾಟಗಾರರಿಗೆ ರಾಜ್ಯ ಗೌರವಧನ ಮಂಜೂರಾತಿ ನೀಡಿ ಹೊರಡಿಸಿದ ಆದೇಶದಲ್ಲಿ ಅವರ ಮರಣ ನಂತರ ನಾಮ ನಿರ್ದೇಶನ ಮಾಡದೆ ಇರುವ ಪ್ರಕರಣಗಳು ಕುಟುಂಬ ಪಿಂಚಣಿ ಮಂಜೂರಾತಿಗಾಗಿ ಸರ್ಕಾರಕ್ಕೆ ಸಲ್ಲಿಸುತ್ತಿರುವುದು ಕಂಡುಬಂದಿದೆ. ವಿಧವೆ ಪತಿಯನ್ನು ಕಳೆದುಕೊಂಡು ದುಃಖದಲ್ಲಿರುವಾಗ ಕುಟುಂಬ ಪಿಂಚಣಿಗಾಗಿ ಸರ್ಕಾರಕ್ಕೆ ಅರ್ಜಿ ಸಲ್ಲಿಸಿದರೂ ಸಹ ಸದರಿ ಪ್ರಸ್ತಾವನೆಯ ಬಗ್ಗೆ ಸಂಬಂಧಿಸಿದ ಜಿಲ್ಲಾಧಿಕಾರಿಗಳಿಂದ ವರದಿ ಪಡೆದು ಕ್ರಮ ಕೈಗೊಳ್ಳುವುದು ವಿಳಂಬವಾಗುತ್ತ

59



ಸಾಧ್ಯತೆ ಇರುವುದರಿಂದ ಪಟ್ಟಿಯನ್ನು ಕಳೆದುಕೊಂಡಿರುವ ಅಸಾಧಾರಣವಾದ ಸ್ವಾತಂತ್ರ್ಯ ಹೋರಾಟಗಾರರ ವಿಧವಾ ಪತ್ನಿಯರಿಗೆ ಕುಟುಂಬ ಪಿಂಚಣಿ ಕೂಡ ಸಿಗುವಂತಾಗಬೇಕೆಂಬ ಉದ್ದೇಶದಿಂದ ಸ್ವಾತಂತ್ರ್ಯ ಹೋರಾಟಗಾರರಿಗೆ ಗೌರವಧನ ಮಂಜೂರು ಮಾಡಿ ದೃಢೀಕರಿಸಲ್ಪಟ್ಟಿರುವ ಸ್ವಾತಂತ್ರ್ಯ ಹೋರಾಟಗಾರರ ಮರಣದ ನಂತರ ನಾವು ನಿರ್ದೇಶನ ಮಾಡಿದಲ್ಲಿ, ಅಂತಹ ಮಾಡದೆ ಇದ್ದರೂ ಸಹ ಸರ್ಕಾರಿ ಆದೇಶ ಸಂಖ್ಯೆ ಡಿಪಿಎಆರ್ 67 ಪಿಎಫ್‌ಎಸ್ 78 ದಿನಾಂಕ 12-6-78ರಲ್ಲಿ ನೀಡಿರುವ ಅಧಿಕಾರದನ್ವಯ ಹಾಗೂ ಕರ್ನಾಟಕ ಸ್ವಾತಂತ್ರ್ಯ ಸೈನಿಕರುಗಳ ಗೌರವಧನ ಯೋಜನೆ 1969ರ ನಿಯಮ 4ರನ್ವಯ ಅವಶ್ಯಕ ದಾಖಲೆಗಳನ್ನು ಪಡೆದು ಪರಿಶೀಲಿಸಿ ಮೃತ ಸ್ವಾತಂತ್ರ್ಯ ಯೋಧರ ಪತ್ನಿಯರಿಂದ ದೃಢೀಕರಿಸಿಕೊಂಡು ಕುಟುಂಬ ಪಿಂಚಣಿ ಮಂಜೂರು ಮಾಡಲು ಕ್ರಮ ಕೈಗೊಳ್ಳುವಂತೆ ಈ ಮೂಲಕ ಸೂಚಿಸಲಾಗಿದೆ.

ಸ್ವಾತಂತ್ರ್ಯ ಯೋಧರ ವಿಧವೆಯರ ಪತ್ನಿಗೆ(ಕಂಡಿಕೆ) ಕುಟುಂಬ ಪಿಂಚಣಿ ಮಂಜೂರಾತಿ ಬಗ್ಗೆ ಕಾನೂನು ಇಲಾಖೆಯು ನೀಡಿರುವ ಸ್ಪಷ್ಟೀಕರಣದ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಲಗತ್ತಿಸಿದೆ. ( ಅನುಬಂಧ )

(ಕೆ. ಅಬ್ದುಲ್ ಖಾದರ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ರಾಜಕೀಯ ವಿಶ್ರಾಂತಿ ವೇತನ).

ಗೆ,

ಸಂಕಲನಕಾರರು ಕರ್ನಾಟಕ ರಾಜ್ಯ ಪತ್ರ, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 1000 ಪ್ರತಿಗಳನ್ನು ಕಳುಹಿಸಲು ಕೋರಿದೆ.

ಪ್ರತಿ:

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಎಲ್ಲಾ ಜಿಲ್ಲಾಧಿಕಾರಿಗಳು.
3. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು.
4. ಆರ್ಥಿಕ ಇಲಾಖೆ (ಪಿಂಚಣಿ).
5. ವಾರ ಪತ್ರ

62 ಕರ್ನಾಟಕ ಸರ್ಕಾರ 93

ಸಂಖ್ಯೆ: ಡಿಪಿಎಆರ್ 52 ಪಿಎಫ್‌ಪಿ 98.

ಕರ್ನಾಟಕ ಸರ್ಕಾರದ ಸಚಿವಾಲಯ,
11ನೇ ಮಹಡಿ, ವಿಶ್ವೇಶ್ವರಯ್ಯ ಕೇಂದ್ರ,
ವಿಶ್ವೇಶ್ವರಯ್ಯ ಮುಖ್ಯ ಗೋಪುರ,
ಬೆಂಗಳೂರು, ದಿನಾಂಕ: 23-5-1998

## ಸುತ್ತೋಲೆ

ವಿಷಯ: ಸ್ವಾತಂತ್ರ್ಯ ಹೋರಾಟಗಾರರ ವಿಧವಾ ಪತ್ನಿಯರಿಗೆ ಕುಟುಂಬ ಪಿಂಚಣಿ ಮಂಜೂರು ಮಾಡಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ಪ್ರತ್ಯಾಯೋಜಿಸುವ ಬಗ್ಗೆ.

ಉಲ್ಲೇಖ: ಸರ್ಕಾರಿ ಆದೇಶ ಸಂಖ್ಯೆ:ಡಿಪಿಎಆರ 67 ಪಿಎಫ್‌ಪಿ 78 ದಿನಾಂಕ 12-6-78.

---

ಕರ್ನಾಟಕ ಸ್ವಾತಂತ್ರ್ಯ ಸೈನಿಕ ಸನ್ಮಾನ ಗೌರವಧನ ಪರಿಯೋಜನೆ 1969ರ ನಿಯಮ 3(1)ರನ್ವಯ ಪ್ರತಿಯೊಬ್ಬ ಸ್ವಾತಂತ್ರ್ಯ ಹೋರಾಟಗಾರರು ಮತ್ತು ಮೃತ ಸ್ವಾತಂತ್ರ್ಯ ಹೋರಾಟಗಾರರ ಪತ್ನಿ : ಪತಿ ಅಥವಾ ಅಪ್ರಾಪ್ತ ವಯಸ್ಸಿನ ಮಕ್ಕಳಿಗೂ ಸಹ ಪಿಂಚಣಿ ಮಂಜೂರಾತಿ ಹೊಂದಲು ಅರ್ಹರಾಗಿರುತ್ತಾರೆ. ಸ್ವಾತಂತ್ರ್ಯ ಚಳುವಳಿಯಲ್ಲಿ ಭಾಗವಹಿಸಿದ ಸ್ವಾತಂತ್ರ್ಯ ಹೋರಾಟಗಾರರು ರಾಜ್ಯ ಗೌರವಧನ ಮಂಜೂರಾತಿ ಕೋರಿ ಅರ್ಜಿ ಸಲ್ಲಿಸಿದಲ್ಲಿ ಪರಿಶೀಲಿಸಿ ಗೌರವಧನ ಮಂಜೂರು ಮಾಡಲಾಗುತ್ತಿದೆ.

ಕರ್ನಾಟಕ ಸ್ವಾತಂತ್ರ್ಯ ಸೈನಿಕ ಸನ್ಮಾನ ಗೌರವಧನ ಪರಿಯೋಜನೆ 1969ರ ನಿಯಮ 3(1)ರನ್ವಯ ಗೌರವಧನ ಪಡೆಯುತ್ತಿರುವ ಸ್ವಾತಂತ್ರ್ಯ ಯೋಧರು ಮೃತರಾದಲ್ಲಿ ಅವರ ವಿಧವಾ ಪತ್ನಿಯರಿಂದ ಕರ್ನಾಟಕ ಸ್ವಾತಂತ್ರ್ಯ ಸೈನಿಕ ಸನ್ಮಾನ ಗೌರವಧನ ಪರಿಯೋಜನೆ 1969ರ ನಿಯಮ 4ರನ್ವಯ ನಿಗದಿತ ಅರ್ಜಿ ಜೊತೆಗೆ ಮರಣ ಸಮರ್ಥನಾ ಪತ್ರ ಮತ್ತು ಪ್ರಮಾಣ ಪತ್ರ ಇತ್ಯಾದಿ ಅವಶ್ಯಕ ದಾಖಲೆಗಳನ್ನು ಪಡೆದು ಅವರಿಗೆ ಕುಟುಂಬ ಪಿಂಚಣಿ ಮಂಜೂರು ಮಾಡುವ ಅಧಿಕಾರವನ್ನು ಸರ್ಕಾರಿ ಆದೇಶ ಸಂಖ್ಯೆ:ಡಿಪಿಎಆರ 67 ಪಿಎಫ್‌ಪಿ 78 ದಿನಾಂಕ 12-6-78ರಲ್ಲಿ ಜಿಲ್ಲಾಧಿಕಾರಿಗಳಿಗೆ ನೀಡಲಾಗಿದೆ (ಪ್ರತಿ ಲಗತ್ತಿಸಿದೆ). ಆದರೆ ಕೆಲವೊಂದು ಪ್ರಕರಣಗಳಲ್ಲಿ ಅಂದರೆ ಸ್ವಾತಂತ್ರ್ಯ ಹೋರಾಟಗಾರರಿಗೆ ರಾಜ್ಯ ಗೌರವಧನ ಮಂಜೂರಾತಿ ನೀಡಿ ಹೊರಡಿಸಿದ ಆದೇಶದಲ್ಲಿ ಅವರ ಮರಣದ ನಂತರ ನಾಮ ನಿರ್ದೇಶನ ಮಾಡದೆ ಇರುವ ಪ್ರಕರಣಗಳು ಕುಟುಂಬ ಪಿಂಚಣಿ ಮಂಜೂರಾತಿಗಾಗಿ ಸರ್ಕಾರಕ್ಕೆ ಸಲ್ಲಿಸುತ್ತಿರುವುದು ಕಂಡುಬಂದಿದೆ. ಮೊದಲೆ ಪತ್ನಿಯನ್ನು ಕಳೆದುಕೊಂಡು ದು:ಖದಲ್ಲಿರುವಾಗ ಕುಟುಂಬ ಪಿಂಚಣಿಗಾಗಿ ಸರ್ಕಾರಕ್ಕೆ ಅರ್ಜಿ ಸಲ್ಲಿಸಿದರೂ ಸಹಿತ ಸದರಿ ಪ್ರಸ್ತಾವನೆಯ ಬಗ್ಗೆ ಸಂಬಂಧಿಸಿದ ಜಿಲ್ಲಾಧಿಕಾರಿಗಳಿಂದ ವರದಿ ಪಡೆದು ಕ್ರಮ ಕೈಗೊಳ್ಳುವುದು. ವಿಳಂಬವಾಗುವ

63



ಸಾಧ್ಯತೆ ಇರುವುದರಿಂದ ಪತ್ನಿಯನ್ನು ಕಳೆದುಕೊಂಡು ದು:ಖದಲ್ಲಿರುವ ಸ್ವಾತಂತ್ರ್ಯ ಹೋರಾಟಗಾರರ ವಿಧವಾ ಪತ್ನಿಯರಿಗೆ ಕುಟುಂಬ ಪಿಂಚಣಿ ತಕ್ಷಣ ಸಿಗುವಂತಾಗಬೇಕೆಂಬ ಉದ್ದೇಶದಿಂದ ಸ್ವಾತಂತ್ರ್ಯ ಹೋರಾಟಗಾರರಿಗೆ ಗೌರವಧನ ಮಂಜೂರು ಮಾಡಿ ಹೊರಡಿಸಿದ ಆದೇಶದಲ್ಲಿ ಸ್ವಾತಂತ್ರ್ಯ ಹೋರಾಟಗಾರರ ಮರಣದ ನಂತರ ನಾಮ ನಿರ್ದೇಶನ ಮಾಡಿದಲ್ಲಿ ಅಥವಾ ಮಾಡದೆ ಇದ್ದರೂ ಸಹ ಸರ್ಕಾರಿ ಆದೇಶ ಸಂಖ್ಯೆ:ಡಿಪಿಎಆರ 67 ಪಿಎಫ್‌ಪಿಸ 78 ದಿನಾಂಕ 12-6-78ರಲ್ಲಿ ನೀಡಿರುವ ಅಧಿಕಾರದನ್ವಯ ಹಾಗೂ ಕರ್ನಾಟಕ ಸ್ವಾತಂತ್ರ್ಯ ಸೈನಿಕ ಸನ್ಮಾನ ಗೌರವಧನ ಪರಿಯೋಜನೆ 1969ರ ನಿಯಮ 4ರನ್ವಯ ಅವಶ್ಯಕ ದಾಖಲೆಗಳನ್ನು ಪಡೆದು ಪರಿಶೀಲಿಸಿ ಮೃತ ಸ್ವಾತಂತ್ರ್ಯ ಯೋಧರ ಪತ್ನಿಯೆಂದು ದೃಢೀಕರಿಸಿಕೊಂಡು ಕುಟುಂಬ ಪಿಂಚಣಿ ಮಂಜೂರು ಮಾಡಲು ಕ್ರಮ ಕೈಗೊಳ್ಳುವಂತೆ ಈ ಮೂಲಕ ಸೂಚಿಸಲಾಗಿದೆ.

ಸ್ವಾತಂತ್ರ್ಯ ಯೋಧರ ಎರಡನೆಯ ಪತ್ನಿಗೆ(ಹೆಂಡತಿ) ಕುಟುಂಬ ಪಿಂಚಣಿ ಮಂಜೂರಾತಿ ಬಗ್ಗೆ ಕಾನೂನು ಇಲಾಖೆಯು ನೀಡಿರುವ ಸ್ಪಷ್ಟೀಕರಣದ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಲಗತ್ತಿಸಿದೆ. ( ಅನುಬಂಧ )

(ಕೆ. ಅಬ್ದುಲ ಅಹದ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಆಸುಇ (ರಾಜಕೀಯ ವಿಶ್ರಾಂತಿ ವೇತನ).

ಗೆ,

ಸಂಕಲನಕಾರರು ಕರ್ನಾಟಕ ರಾಜ್ಯ ಪತ್ರ ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 1000 ಪ್ರತಿಗಳನ್ನು ಕಳುಹಿಸಲು ಕೋರಿದೆ.

ಪ್ರತಿ:

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಎಲ್ಲಾ ಜಿಲ್ಲಾಧಿಕಾರಿಗಳು.
3. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು.
4. ಆರ್ಥಿಕ ಇಲಾಖೆ (ಪಿಂಚಣಿ).
5. ವಾರ ಪತ್ರ.